## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಸಫಾಯಿ ಕರ್ಮಚಾರಿಗಳ ಹಾಗೂ ಪೌರಕಾರ್ಮಿಕರ ಸರ್ವತೋಮುಖ ಅಭಿವೃದ್ಧಿಗಾಗಿ "ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ"ವನ್ನು ಸ್ಥಾಪಿಸುವ ಬಗ್ಗೆ

ಓದಲಾಗಿದೆ: ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಇವರ ಪತ್ರ ದಿನಾಂಕ:24-08-2015

*****

**ಪ್ರಸ್ತಾವನೆ:**

2015-16ನೇ ಸಾಲಿನ ಆಯವ್ಯಯ (ಕಂಡಿಕೆ ಸಂಖ್ಯೆ:210) ದಲ್ಲಿ ರಾಜ್ಯದಲ್ಲಿ ರಾಜ್ಯ ಸಫಾಯಿ ಕರ್ಮಚಾರಿಗಳ ಹಾಗೂ ಪೌರಕಾರ್ಮಿಕರ ಸರ್ವತೋಮುಖ ಅಭಿವೃದ್ಧಿಗಾಗಿ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಘೋಷಿಸಲಾಗಿದೆ. ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ದಿನಾಂಕ:26-05-2015ರಲ್ಲಿ ನಡೆದ ಸಭೆಯಲ್ಲಿ ಸದರಿ ನಿಗಮದ ಸ್ಥಾಪನೆಗಾಗಿ ರೂ.25.00 ಕೋಟಿಗಳನ್ನು ಒದಗಿಸಲು ಅನುಮೋದನೆ ನೀಡಲಾಗಿರುತ್ತದೆ.

ಅದರಂತೆ ಮೇಲೆ ಓದಲಾದ ಪತ್ರದಲ್ಲಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರು ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯಲ್ಲಿ ಕರ್ನಾಟಕದಲ್ಲಿ ಸಫಾಯಿ ಕರ್ಮಚಾರಿಗಳು/ಪೌರ ಕಾರ್ಮಿಕರು/ಮ್ಯಾನುವೆಲ್ ಸ್ಕ್ಯಾವೆಂಜರ್ಸ್ ಸುಮಾರು 10.00 ಲಕ್ಷ ಜನಸಂಖ್ಯೆಯನ್ನು ಹೊಂದಿದ್ದು, ಆರ್ಥಿಕವಾಗಿ, ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಈ ಜನ ತುಂಬಾ ಹಿಂದುಳಿದವರಾಗಿದ್ದು, ಮತ್ತು ಇವರ ಶಿಕ್ಷಣ ಮಟ್ಟ ಸುಮಾರು ಶೇ.5 ರಷ್ಟು ಮಾತ್ರ ಹೊಂದಿರುತ್ತಾರೆ. ಅದರಿಂದ ಈ ಜನರಿಗೆ ಸರ್ಕಾರಿ ಸವಲತ್ತುಗಳನ್ನು ನೀಡಿ ಅವರ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯಲು ಸದರಿ ನಿಗಮವನ್ನು ಸ್ಥಾಪಿಸಬೇಕೆಂದು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಕಳುಹಿಸಿದ್ದು, ಆರ್ಥಿಕ ಇಲಾಖೆಯು "ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ"ವನ್ನು ಸ್ಥಾಪಿಸಲು ತಾತ್ವಿಕ ಸಹಮತಿ ನೀಡಿರುತ್ತದೆ. ಅದರಂತೆ ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ 215 ಎಸ್‌ಡಿಸಿ 2015, ಬೆಂಗಳೂರು ದಿನಾಂಕ:02-02-2016**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ರಾಜ್ಯ ಸಫಾಯಿ ಕರ್ಮಚಾರಿಗಳ ಹಾಗೂ ಪೌರಕಾರ್ಮಿಕರ ಸರ್ವತೋಮುಖ ಅಭಿವೃದ್ಧಿಗಾಗಿ "ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ"ವನ್ನು ಕಂಪನಿ ಕಾಯ್ದೆ 2013ರನ್ವಯ ಸ್ಥಾಪಿಸಲಾಗಿದೆ. ಸದರಿ ನಿಗಮದ ಕೇಂದ್ರಸ್ಥಾನ ಬೆಂಗಳೂರು.

1) ಸದರಿ ನಿಗಮವನ್ನು ಕಂಪನಿ ಕಾಯ್ದೆ 2013ರನ್ವಯ ಲಗತ್ತಿಸಿದ ಮೆಮೊರಾಂಡಂ ಆಫ್ ಅಸೋಷಿಯೇಷನ್ & ಆರ್ಟಿಕಲ್ ಆಫ್ ಅಸೋಷಿಯೇಷನ್ ಪ್ರಕಾರ ಮತ್ತು ನಿಯಮಗಳಂತೆ ನೊಂದಣಿ ಮಾಡಿಸತಕ್ಕದ್ದು ಮತ್ತು ಈ ಕಾಯ್ದೆಯಡಿಯಲ್ಲಿ ಬರುವ ಇತರ ಪ್ರಮಾಣ ಪತ್ರ ಇತ್ಯಾಧಿಗಳನ್ನು ಪಡೆಯತಕ್ಕದ್ದು.
2) ಸದರಿ ನಿಗಮಕ್ಕೆ ಬೇಕಾದ ಹುದ್ದೆಗಳನ್ನು ಸೃಜಿಸಲು ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

3) ಸದರಿ ನಿಗಮದ ಉದ್ದೇಶದಂತೆ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಕ್ರಮವಹಿಸುವುದು.
4) ಸದರಿ ನಿಗಮಕ್ಕೆ ನಿರ್ಧರಿಸಿದ ಅನುದಾನವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕ ಶೀರ್ಷಿಕೆ 4225-01-800-0-07 ಯಡಿಯಲ್ಲಿ ವೆಚ್ಚವನ್ನು ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 811 ವೆಚ್ಚ-3/2015 ದಿನಾಂಕ:01-01-2016ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ದಿನಾಂಕ:26-05-2015ರ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ರಾಜ್ಯ ಅಭಿವೃದ್ಧಿ ಪರಿಷತ್ತಿನ ಅನುಮೋದನೆ ಮೇರೆಗೆ ನೀಡಿದ ಸರ್ಕಾರಿ ಆದೇಶ ಸಂಖ್ಯೆ:ಸಕಇ 284 ಎಸ್‌ಎಲ್‌ಪಿ 2015 ದಿನಾಂಕ:23-07-2015ರನ್ವಯ ಹೊರಡಿಸಲಾಗಿದೆ.

**(ದಿನಾಂಕ:25-01-2016ರ ಸಚಿವ ಸಂಪುಟದ ಅನುಮೋಧನೆ ಮೇರೆಗೆ)**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ವಿ. ರತ್ನಮ್ಮ 02/02

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

**<u>ಇವರಿಗೆ:</u>**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು. ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 1000 ಪ್ರತಿಗಳನ್ನು ಕಳುಹಿಸಿಕೊಡಲು ಕೋರಿದೆ.

**<u>ಪ್ರತಿ:</u>**
1) ಮಹಾಲೇಖಪಾಲರು (ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
3) ಮಾನ್ಯ ಮುಖ್ಯಮಂತ್ರಿಯವರ ಅಪರ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
4) ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ
5) ಅಧ್ಯಕ್ಷರು, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ, ಬೆಂಗಳೂರು
6) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7) ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ
8) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ
9) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
10) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
11) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
12) ವ್ಯವಸ್ಥಾಪಕ ನಿರ್ದೇಶಕರು, ಡಾ:ಬಾಬು ಜಗಜೀವನ ರಾಂ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
13) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು
14) ಕಾರ್ಯದರ್ಶಿ, ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಆಯೋಗ, ಬೆಂಗಳೂರು
15) ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
16) ಎಲ್ಲಾ ಜಂಟಿನಿರ್ದೇಶಕರು/ಉಪನಿರ್ದೇಶಕರುಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
17) ಹೆಚ್ಚುವರಿ ಪ್ರತಿಗಳು/ಬಿಡಿ ಪ್ರತಿಗಳು.

*****